ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 11/07/2019



## ಸ್ಪೀಕರ್ ತೀರ್ಮಾನ ಇಂದು ವಿಚಾರಣೆ

**ಹೊಸದಿಲ್ಲಿ:** ಸ್ಪೀಕರ್ ತಮ್ಮ ರಾಜೀನಾಮೆ ಸ್ವೀಕಾರಕ್ಕೆ ಉದ್ದೇಶಪೂರ್ವಕ ವಿಳಂಬ ಮಾಡುತ್ತಿದ್ದಾರೆ ಎಂದು ಆಪಾದಿಸಿ 10 ಮಂದಿ ಅತೃಪ್ತ ಶಾಸಕರು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ. ವಿಷಯದ ಗಂಭೀರತೆ ಪರಿಗಣಿಸಿದ ಕೋರ್ಟ್ ಗುರುವಾರವೇ ದಾವೆ ಕೈಗೆತ್ತಿಕೊಳ್ಳಲು ನಿರ್ಧರಿಸಿದ್ದು, ಮುಖ್ಯ ನ್ಯಾಯಾಧೀಶ ರಂಜನ್ ಗೊಗೊಯ್ ಪೀಠವೇ ವಿಚಾರಣೆ ನಡೆಸಲಿದೆ. ಹಿರಿಯ ವಕೀಲ ಮುಕುಲ್ ರೋಹಟ್ಗಿ ಅತೃಪ್ತ ಶಾಸಕರ ಪರ ವಾದ ಮಂಡಿಸಲಿದ್ದಾರೆ. ದಾವೆಯಲ್ಲಿ ಸಿಎಂ ಕುಮಾರಸ್ವಾಮಿ ಅವರ ಕಾರ್ಯವೈಖರಿ ವಿರುದ್ಧವೂ ಆಕ್ರೋಶ ವ್ಯಕ್ತಪಡಿಸಲಾಗಿದೆ.

### ಕೋರ್ಟ್ ನಡೆ ಏನು?

**ಸ್ಪೀಕರ್ ಕಾರ್ಯನಿರ್ವಹಣೆಯನ್ನು ಪ್ರಶ್ನಿಸುವ ಸಾಧ್ಯತೆ ಕಡಿಮೆ.**

**2018ರ ಮೇನಲ್ಲಿ ಯಡಿಯೂರಪ್ಪ ಅವರಿಗೆ ವಿಶ್ವಾಸ ಮತ ಸಾಬೀತುಪಡಿಸಲು ರಾಜ್ಯಪಾಲರು ನೀಡಿದ 15 ದಿನಗಳ ಕಾಲಾವಕಾಶವನ್ನು ಕಡಿತಗೊಳಿಸಿದಂತೆ, ತುರ್ತು ವಿಚಾರಣೆಗೆ ಸ್ಪೀಕರ್ ಅವರಿಗೆ ಸೂಚಿಸಬಹುದು.**